**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂಹಾ/ಪಶಾ/51/2016-17. ದಿನಾಂಕ: 20.02.2017
2. ಸರ್ಕಾರದ ಇದೇ ಸಮಸಂಖ್ಯೆಯ ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 01.09.2017.
3. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯುತಿ, ಅರಕಲಗೂಡು ತಾಲ್ಲೂಕು ರವರ ಪತ್ರ ಸಂಖ್ಯೆ: ತಾಪಂಅ/ಕಾ.ನಿ.ಅ/2017-18, ದಿನಾಂಕ: 06.09.2017

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ರವರು ದಿನಾಂಕ: 28.07.2016, 30.08.2016, 06.10.2016 ಮತ್ತು 18.11.2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯ ಪ್ರಕರಣ 43(ಎ)(iii) ರನ್ವಯ ಕ್ರಮ ಕೈಗೊಳ್ಳಲು ದಿನಾಂಕ: 28.07.2017 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ದಿನಾಂಕ: 07-09-2017 ರಂದು ಲಿಖಿತ ಹೇಳಿಕೆಯೊಂದಿಗೆ ಹಾಜರಾಗುವಂತೆ ತಿಳಿಸಿ ದಿನಾಂಕ: 01.09.2017 ರಂದು ವಿಚಾರಣಾ ತಿಳುವಳಿಕೆ ಪತ್ರವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ದಿನಾಂಕ 07.09.2017 ರಂದು ವಿಚಾರಣೆಗೆ ಹಾಜರಾಗುವಂತೆ ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ರವರಿಗೆ ನೀಡಲಾದ ತಿಳುವಳಿಕೆ ಪತ್ರವನ್ನು ದಿನಾಂಕ 02.09.2017 ರಂದು ಜಾರಿ ಮಾಡಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಅರಕಲಗೂಡು ತಾಲ್ಲುಕು ರವರು ವರದಿ ಸಲ್ಲಿಸಿರುತಾರೆ ಆದರೆ ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ರವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ರವರು ದಿನಾಂಕ: 28.07.2016, 30.08.2016, 06.10.2016 ಮತ್ತು 18.11.2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರಂತೆ ಅಗ್ರಹಾರ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/263/ಗ್ರಾಪಂಅ/2017**
**ಬೆಂಗಳೂರು, ದಿನಾಂಕ:16-10-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ಇವರು ದಿನಾಂಕ: 28.07.2016, 30.08.2016, 06.10.2016 ಮತ್ತು 18.11.2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ,

ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದರಿಂದ, ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಅಗ್ರಹಾರ ಗ್ರಾಮ ಪಂಚಾಯತಿಯ ಉಪಾಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

(ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ
ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/X/12

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ
3) ಶ್ರೀ ಎ.ಎನ್.ಗುರುನಾಥ, ಉಪಾಧ್ಯಕ್ಷರು, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಗ್ರಹಾರ ಗ್ರಾಮ ಪಂಚಾಯತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
6) ಗಣಕ ಕೋಶ